ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	**888(835)**
ಸದಸ್ಯರ ಹೆಸರು	:	ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	28.09.2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ.	ಕಾರವಾರ ಜಿಲ್ಲೆಯ ಕೆಲವೊಂದು ತಾಲ್ಲೂಕು ಕೇಂದ್ರದಲ್ಲಿ ಬಿಸಿಯೂಟದ ಅಕ್ಷರದಾಸೋಹ ಸಂಯೋಜನೆ ಅಧಿಕಾರಿ ಹಾಗೂ (ಎಡಿ) ಅವ್ಯವಹಾರದಲ್ಲಿ ತೊಡಗಿರುವುದು ಜಿಲ್ಲಾ ಅಕ್ಷರದಾಸೋಹ ಅಧಿಕಾರಿ ಶಾಮೀಲಾಗಿ ದರೋಡೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನಿಡುವುದು)	ಬಂದಿಲ್ಲ
ಆ.	ಹಳಿಯಾಳ ತಾಲ್ಲೂಕಿನಲ್ಲಿ ಬಿಸಿಯೂಟ ಅಕ್ಷರದಾಸೋಹ ಸಂಯೋಜನೆ ಅಧಿಕಾರಿ (ಎಟಿ) ಪ್ರತಿಯೊಂದು ಶಾಲೆಗೆ ಭೇಟಿ ನೀಡಿ ಅನಾವಶ್ಯಕ ಶಿಕ್ಷಕರಿಗೆ ಕಿರುಕುಳ ನೀಡಿ ಅವರಿಂದ ಹಣ ವಸೂಲಿ ಮಾಡಿ ಅಧಿಕಾರ ದುರಪಯೋಗ ಮಾಡುತ್ತಿರುವವರ ಮೇಲೆ ಸೂಕ್ತ ತನಿಖೆ ಮಾಡಿ ಪ್ರಭಾರ ಸ್ಥಾನದಲ್ಲಿರುವ ಅವರ ಸ್ಥಳಕ್ಕೆ ಬೇರೆಯವನ್ನು ನೇಮಕ ಮಾಡುವರೇ? (ವಿವರ ನೀಡುವುದು)	ಹಳಿಯಾಳ ತಾಲ್ಲೂಕು ಅಕ್ಷರದಾಸೋಹ ಸಹಾಯಕ ನಿರ್ದೇಶಕರು (ಎಡಿ) ಯವರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಳಿಯಾಳ ಕಛೇರಿಯ ಪತ್ರಾಂಕಿತ ವ್ಯವಸ್ಥಾಪಕರು ಆಗಿದ್ದು, ಮಾನ್ಯ ಮುಖ್ಯ ಕಾರ್ಯ ನಿರ್ವಹಣಾ ಅಧಿಕಾರಿಗಳು ಉತ್ತರ ಕನ್ನಡ ಜಿಲ್ಲಾ ಪಂಚಾಯತ್ ಕಾರವಾರ ಇವರ ಆದೇಶದನ್ವಯ ಅಕ್ಷರ ದಾಸೋಹ ಸಹಾಯಕ ನಿರ್ದೇಶಕರ ಹುದ್ದೆಯ ಹೆಚ್ಚುವರಿ ಪ್ರಭಾರ ಪಡೆದಿರುತ್ತಾರೆ. ಸದರಿಯವರ ಕಾರ್ಯ ನಿರ್ವಹಣೆ ಬಗ್ಗೆ ಹಳಿಯಾಳ ತಾಲ್ಲೂಕಿನಲ್ಲಿ ಯಾವುದೇ ಶಾಲಾ ಮುಖ್ಯ ಶಿಕ್ಷಕರಿಂದಾಗಲೀ ಅಥವಾ ಅಡುಗೆಯವರಾಗಲೀ ಈವರೆಗೆ ಯಾವುದೇ ಲಿಖಿತ ಮೌಖಿಕ ದೂರು ದಾಖಲಾಗಿರುವುದಿಲ್ಲ.

ಸಂಖ್ಯೆ: ಇಪಿ 164 ಎಸ್‌ಎಲ್‌ಬಿ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ
ಸಕಾಲ ಸಚಿವರು